# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 796 |
| ಸದಸ್ಯರ ಹೆಸರು | ಶ್ರೀ ಸೂರಜ್ ರೇವಣ್ಣ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 12.12.2023 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ಜಿಲ್ಲೆ, ಸಕಲೇಶಪುರ ತಾಲ್ಲೂಕು, ಬೆಳಗೋಡು ಹೋಬಳಿ, ಹೊಸಗದ್ದೆ ಗ್ರಾಮದ ಸರ್ವೆ ನಂಬರ್ 149 ರಲ್ಲಿ ಜಲ್ಲಿ ಕ್ರಷರ್ ಘಟಕ ಸ್ಥಾಪಿಸಿರುವುದಕ್ಕೆ ಸಾರ್ವಜನಿಕರಿಂದ ತಕರಾರು ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮದ ಬಗ್ಗೆ ವಿವರ ನೀಡುವುದು. | ಬಂದಿರುತ್ತದೆ.<br>ಶ್ರೀ ಲಕ್ಷ್ಮೀ ಎಂಟರ್ ಪ್ರೈಸೆಸ್, ಪ್ರೊ: ಶ್ರೀ ಆರ್. ಯೋಗೇಶ್ ಬಿನ್ ರಾಜು, ಇವರು ಸಕಲೇಶಪುರ ತಾಲ್ಲೂಕು, ಬೆಳಗೋಡು ಹೋಬಳಿ, ಹೊಸಗದ್ದೆ ಗ್ರಾಮದ ಸರ್ವೆ ನಂ.149ರ 01-00 ಎಕರೆ ಪಟ್ಟಾ ಜಮೀನಿನಲ್ಲಿ ಕ್ರಷರ್ ಘಟಕ ಸ್ಥಾಪಿಸಲು ಅನುಮತಿ ಕೋರಿ ದಿನಾಂಕ 09.11.2021 ರಂದು ಅರ್ಜಿ ಸಲ್ಲಿಸಿದ್ದು, ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ, 2011 ಮತ್ತು ನಿಯಮಗಳು, 2012 ರಂತೆ ಜಿಲ್ಲಾ ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣಾ ಪ್ರಾಧಿಕಾರದಿಂದ ಸ್ಟೋನ್ ಕ್ರಷರ್ ಸ್ಥಾಪನೆಗೆ ಸುರಕ್ಷಿತ ವಲಯವೆಂದು ಘೋಷಿಸಿ, ದಿನಾಂಕ 31.01.2022 ರಂದು ಅಧಿಸೂಚನೆ ಜಾರಿ ಮಾಡಿ, ಕರ್ನಾಟಕ ರಾಜ್ಯಪತ್ರದಲ್ಲಿ ದಿನಾಂಕ 02.02.2022 ರಂದು ಪ್ರಕಟಿಸಿ, ದಿನಾಂಕ 05.02.2022 ರಂದು ಸುರಕ್ಷಿತ ಅನುಪಾಲನಾ ಪ್ರಮಾಣ ಪತ್ರ 'ಫಾರಂ-ಬಿ1' ನ್ನು ವಿತರಿಸಲಾಗಿರುತ್ತದೆ.<br>ಮುಂದುವರೆದು, ಹಾಸನ ಜಿಲ್ಲೆ, ಸಕಲೇಶಪುರ ತಾಲ್ಲೂಕು, ಹೊಸಗದ್ದೆ ಗ್ರಾಮದ ಸರ್ವೆ ನಂ.149 ರಲ್ಲಿ 02-32 ಎಕರೆ ಪಟ್ಟಾ ಜಮೀನಿನಲ್ಲಿ ಶ್ರೀ ಲಕ್ಷ್ಮೀ ಎಂಟರ್ ಪ್ರೈಸಸ್ ರವರಿಗೆ ದಿನಾಂಕ 29.08.2022 ರಂದು ಗಣಿ ಗುತ್ತಿಗೆ ಮಂಜೂರಾತಿಗೆ ಅಧಿಸೂಚನೆ ಹೊರಡಿಸಿದ್ದು, ದಿನಾಂಕ 25.09.2023 ರಿಂದ ಜಾರಿಗೆ ಬರುವಂತೆ 20 ವರ್ಷಗಳಿಗೆ ಸ್ಫೋಟಕ ರಹಿತ ಗಣಿಗಾರಿಕೆಗೆ ಕಟ್ಟಡ ಕಲ್ಲುಗಣಿ ಗುತ್ತಿಗೆಗೆ ಕರಾರು ಅಮಲ್ಜಾರಿ ಮಾಡಲಾಗಿರುತ್ತದೆ.<br>ಹೊಸಗದ್ದೆ ಗ್ರಾಮದಲ್ಲಿ ಕಲ್ಲು ಗಣಿಗಾರಿಕೆಗೆ ಲೈಸೆನ್ಸ್ ಹಾಗೂ ಕ್ರಷರ್ ಘಟಕ ಸ್ಥಾಪನೆಗೆ ಲೈಸೆನ್ಸ್ ಮಂಜೂರಾತಿ ಯನ್ನು ವಿರೋಧಿಸಿ ದಿನಾಂಕ 22.12.2022 ರಂದು ಸಾರ್ವಜನಿಕ ತಕರಾರು ಅರ್ಜಿಗಳು ಸ್ವೀಕೃತವಾಗಿದ್ದು, ದಿನಾಂಕ 28.02.2023 ರಂದು ತಹಸೀಲ್ದಾರ್, – |

-ಸಕಲೇಶಪುರ ತಾಲ್ಲೂಕು, ಸಹಾಯಕ ಪರಿಸರ ಅಧಿಕಾರಿಗಳು, ವಲಯ ಅರಣ್ಯಾಧಿಕಾರಿಗಳು ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖಾ ಅಧಿಕಾರಿಗಳೊಂದಿಗೆ ಅರ್ಜಿತ ಹೊಸಗದ್ದೆ ಗ್ರಾಮದ ಸರ್ವೆ ನಂ.149ರ ಕಲ್ಲುಗಣಿ ಗುತ್ತಿಗೆ ಹಾಗೂ ಕ್ರಷರ್ ಪ್ರದೇಶಗಳಿಗೆ ಬೇಟಿ ನೀಡಿ ದೂರುದಾರರು ದೂರಿನಲ್ಲಿ ಪ್ರಸ್ತಾಪಿಸಿರುವ ಪ್ರತಿಯೊಂದು ಅಂಶಗಳಿಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಸಿ ಸಲ್ಲಿಸಿರುವ ವರದಿಯಲ್ಲಿ, ಹೊಸಗದ್ದೆ ಗ್ರಾಮದ ಸರ್ವೆ ನಂ.149ರ ಪ್ರದೇಶವು ಆಲೂರು ಹಾಗೂ ಸಕಲೇಶಪುರ ತಾಲ್ಲೂಕುಗಳ ಗಡಿ ಭಾಗಕ್ಕೆ ಹೊಂದಿಕೊಂಡಂತಿದ್ದು, ಭೂದಾಖಲೆಗಳ ಸಹಾಯಕ ನಿರ್ದೇಶಕರು, ಸಕಲೇಶಪುರ ಮತ್ತು ಆಲೂರು ತಾಲ್ಲೂಕು ರವರು ಭೂಮಾಪಕ ರೊಂದಿಗೆ ದಿನಾಂಕ 23.02.2023 ರಂದು ಜಂಟಿ ಮೋಜಣಿ ನಡೆಸಿದ್ದು, ಹೊಸಗದ್ದೆ ಗ್ರಾಮದ ಸರ್ವೆ ನಂ.149ರ ಕಲ್ಲು ಗಣಿಗಾರಿಕೆ ಪ್ರದೇಶವು ಖಾಸಗಿ ಜಮೀನಾಗಿದ್ದು, ಸಕಲೇಶಪುರ ಹಾಗೂ ಆಲೂರು ತಾಲ್ಲೂಕುಗಳ ಸರ್ಕಾರಿ ಸರ್ವೆ ನಂಬರ್‌ಗಳಲ್ಲಿ ಯಾವುದೇ ಒತ್ತುವರಿ ಆಗಿರುವುದಿಲ್ಲ ಹಾಗೂ ಗಣಿಗಾರಿಕೆ ನಡೆದಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ದಿನಾಂಕ 19.08.2023 ರಂದು ಉಪವಿಭಾಗಾಧಿಕಾರಿ, ಸಕಲೇಶಪುರ ಉಪ ವಿಭಾಗ ರವರ ಸಮಕ್ಷಮ ಕಂದಾಯ ಇಲಾಖಾ ಅಧಿಕಾರಿಗಳು, ಭೂಮಾಪನಾ ಇಲಾಖಾ ಅಧಿಕಾರಿಗಳು ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಭೂವಿಜ್ಞಾನಿ ಮತ್ತು ಕಿರಿಯ ಅಭಿಯಂತರ ರೊಂದಿಗೆ ಸ್ಥಳ ಪರಿಶೀಲನೆ ನಡೆಸಿದ್ದು, ಹೊಸಗದ್ದೆ ಗ್ರಾಮದ ಸರ್ವೆ ನಂ.149ರ 03-38 ಎಕರೆ ಜಮೀನು ಶ್ರೀ ಲಕ್ಷ್ಮೀ ಎಂಟರ್ ಪ್ರೈಸಸ್ ರವರಿಗೆ ಕ್ರಯದ ಮೂಲಕ ಬಂದಿದ್ದು, ವ್ಯವಸಾಯೇತರ ಉದ್ದೇಶಕ್ಕಾಗಿ ದಿನಾಂಕ 12.06.2022 ರಂದು ಭೂಪರಿವರ್ತನೆ ಮಾಡಿಸಲಾಗಿರುತ್ತದೆ. ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ವಿಭಾಗ ರವರು ಸದರಿ ಪ್ರದೇಶವು ಅರಣ್ಯ ಪ್ರದೇಶದ ವ್ಯಾಪ್ತಿಗೆ ಬರುವುದಿಲ್ಲವೆಂದು ವರದಿಸಿರುತ್ತಾರೆ. ಈ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ, ಅರ್ಜಿತ ಪ್ರದೇಶದ ಸುತ್ತಮುತ್ತ ಮನೆಗಳು ಇದ್ದು, ಕ್ರಷರ್ ಘಟಕ ಪ್ರದೇಶವು ಮನೆಗಳಿಗೆ ಹತ್ತಿರದಲ್ಲಿದ್ದು, ಸದರಿ ಮನೆಗಳು ಗ್ರಾಮ ಠಾಣಾ / ಕಂದಾಯ ಗ್ರಾಮ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ ಎಂದು ತಹಸೀಲ್ದಾರ್ ರವರು ವರದಿ ಸಲ್ಲಿಸಿರುತ್ತಾರೆಂದು ಉಪವಿಭಾಗಾಧಿಕಾರಿ, ಸಕಲೇಶಪುರ ಉಪ ವಿಭಾಗ ರವರು ದಿನಾಂಕ 21.09.2023 ರಂದು ಜಿಲ್ಲಾಧಿಕಾರಿ, ಹಾಸನ ರವರಿಗೆ ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಜಿಲ್ಲಾ ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣಾ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಸಮಿತಿಯ ನಿರ್ಣಯದಂತೆ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

. . . 3

| | | |
|---|---|---|
| ಆ) | ಜಲ್ಲಿ ಕ್ರಷರ್ / ಕಲ್ಲು ಗಣಿಗಾರಿಕೆ / ಕಲ್ಲು ಮುರಿಯುವ ಘಟಕಗಳ ಲೈಸೆನ್ಸ್ ನೀಡಲು ಇರುವ ಸರ್ಕಾರದ ರೀತಿ-ನೀತಿಗಳೇನು: ಜನ ವಸತಿ ಪ್ರದೇಶ / ಶಾಲಾ ಕಾಲೇಜು / ಮಠ ಮಂದಿರ / ಸಾರ್ವಜನಿಕರು ಹಾದು ಹೋಗುವ ರಸ್ತೆಗಳ ಅಕ್ಕ-ಪಕ್ಕದಲ್ಲಿ ಬಂಡೆಗಳಿದ್ದಲ್ಲಿ ಅಂತಹ ಸ್ಥಳಗಳಿಗೆ ಗಣಿಗಾರಿಕೆಗಾಗಿ ಅನುಮತಿ ನೀಡಲು ಅವಕಾಶ ವಿದೆಯೇ: ಹೊಂಕರವಳ್ಳಿ ಗ್ರಾಮದ ಗ್ರಾಮಸ್ಥರು ಆಲೂರು ತಾಲ್ಲೂಕು, ಹಾಸನ ಜಿಲ್ಲೆ ಇವರು, ಸಲ್ಲಿಸಿರುವ ಆಕ್ಷೇಪಣಾ ಅರ್ಜಿಯ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು: (ವಿವರ ನೀಡುವುದು) | ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಂತೆ, ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ, ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದ ನಂತರ ಅಧಿಸೂಚನೆ ಜಾರಿ ಮಾಡಬೇಕಾಗಿರುತ್ತದೆ. ನಂತರ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ಗುರುತಿಸಿರುವ ಉಪಖನಿಜದ ನಿಕ್ಷೇಪದ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಲು ಟೆಂಡರ್ ಕಂ ಹರಾಜು ಪ್ರಕ್ರಿಯೆ ಕೈಗೊಂಡು, ನಿರ್ದಿಷ್ಟ ಉಪಖನಿಜಗಳಿಗೆ ಸರ್ಕಾರದಿಂದ ಮತ್ತು ನಿರ್ದಿಷ್ಟಪಲ್ಲದ ಉಪಖನಿಜಗಳಿಗೆ ಸಂಬಂಧಿಸಿದಂತೆ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರಿಂದ ಬಿಡ್ ಸ್ವೀಕರಿಸಿಕೊಂಡ ನಂತರ ಯಶಸ್ವಿ ಬಿಡ್ ದಾರರಿಂದ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗುತ್ತದೆ.<br><br>ಪ್ರಸ್ತುತ, ಪಟ್ಟಾ ಜಮೀನುಗಳಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ್‌ಫೋರ್ಸ್ (ಗಣಿ) ಸಮಿತಿಯ ಶಿಫಾರಸ್ಸಿನ ಮೇರೆಗೆ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರಿಂದ ಸಮ್ಮತಿ ಪಡೆದು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು / ಹಿರಿಯ ಭೂವಿಜ್ಞಾನಿ ರವರಿಂದ ಕಲ್ಲು ಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗುತ್ತಿದೆ.<br><br>ದಿನಾಂಕ 17.03.2023 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023ನ್ನು ಜಾರಿಗೆ ತಂದಿದ್ದು, ಅದರಲ್ಲಿ, ದಿನಾಂಕ 12.08.2016ರ ಪೂರ್ವದಲ್ಲಿ ಕಲ್ಲು ಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರಗಳು, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದ ನಂತರ ಕಲ್ಲು ಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮವಹಿಸ ಬೇಕಾಗಿರುತ್ತದೆ.<br><br>ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023 ರ ಉಪ ನಿಯಮ 6(2) ರಂತೆ ಸ್ಫೋಟಕ ಬಳಸಿ ಗಣಿಗಾರಿಕೆ ನಡೆಸಲು ಸಾರ್ವಜನಿಕ ರಚನೆಗಳಿಂದ 200 ಮೀಟರ್ ಹಾಗೂ ನಿಯಂತ್ರಿತ ಸ್ಫೋಟಕ ಬಳಸಿ ಕಲ್ಲು ಗಣಿಗಾರಿಕೆ ನಿರ್ವಹಿಸಲು 100 ಮೀಟರ್ ಅಂತರವನ್ನು ಕಾಯ್ದಿರಿಸಬೇಕಾಗಿರುತ್ತದೆ. |

. . . 4

ಸ್ಟೋನ್ ಕ್ರಷರ್ ಘಟಕ ಸ್ಥಾಪನೆಗೆ ಲೈಸೆನ್ಸ್ ನೀಡಲು ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ, 2011 ಹಾಗೂ ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ನಿಯಮಗಳು, 2012 ರಂತೆ ಕಂದಾಯ, ಅರಣ್ಯ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಕ್ರಷರ್ ಪರವಾನಗಿ ಕೋರಿ ಸಲ್ಲಿಸಿರುವ ಅರ್ಜಿತ ಪ್ರದೇಶವನ್ನು ಜಂಟಿ ಸ್ಥಳ ಪರಿಶೀಲನೆ ನಡೆಸಿ, ಕಲಂ-6ರ ಎಲ್ಲಾ ಷರತ್ತುಗಳು ಪಾಲನೆಯಾದಲ್ಲಿ, ವರದಿ ನೀಡಿದ ನಂತರ ಜಿಲ್ಲಾ ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣಾ ಪ್ರಾಧಿಕಾರದಿಂದ ಅರ್ಜಿತ ಪ್ರದೇಶವನ್ನು ಕ್ರಷರ್ ಸುರಕ್ಷಿತ ವಲಯವೆಂದು ಘೋಷಿಸಿ ಅಧಿಸೂಚನೆ ಹೊರಡಿಸಿ, ಫಾರಂ-ಬಿ1 ರಲ್ಲಿ ಅನುಪಾಲನಾ ಪ್ರಮಾಣ ಪತ್ರ ನೀಡಲಾಗುವುದು.

1. ಕ್ರಷರ್ ಸುರಕ್ಷಿತ ವಲಯವು ರಾಷ್ಟ್ರೀಯ ಹೆದ್ದಾರಿ / ರಾಜ್ಯ ಹೆದ್ದಾರಿಯಿಂದ 200 ಮೀಟರ್ ಅಂತರ ಇರತಕ್ಕದ್ದು.
2. ಜಿಲ್ಲಾ ಮುಖ್ಯ ರಸ್ತೆಗಳಿಂದ 100 ಮೀಟರ್ ಹಾಗೂ ಇತರೆ ರಸ್ತೆಗಳಿಂದ 50 ಮೀಟರ್ ಅಂತರ ಇರತಕ್ಕದ್ದು.
3. ಗ್ರಾಮ, ಶಾಲೆ, ದೇವಸ್ಥಾನಗಳಿಂದ 500 ಮೀಟರ್ ಅಂತರ ಇರತಕ್ಕದ್ದು.
4. ನಗರ ಸಭೆ, ಪುರಸಭೆ ಮತ್ತು ಮಹಾನಗರ ಪಾಲಿಕೆಗಳ ವ್ಯಾಪ್ತಿಯಿಂದ ಹೊರಗೆ ಇರತಕ್ಕದ್ದು.

ಅರ್ಜಿದಾರರು ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ Consent of Establishment (CFE) ಹಾಗೂ Consent for Operation (CFO) ಪಡೆದು ಹಾಜರುಪಡಿಸಿದ ನಂತರ ಜಿಲ್ಲಾ ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣಾ ಪ್ರಾಧಿಕಾರದಿಂದ ಫಾರಂ-ಸಿ (ಕ್ರಷರ್ ಲೈಸೆನ್ಸ್) ರಲ್ಲಿ ಕ್ರಷರ್ ಪರವಾನಗಿ ನೀಡಲಾಗುವುದು.

ಶ್ರೀ ಲಕ್ಷ್ಮೀ ಎಂಟರ್ ಪ್ರೈಸೆಸ್, ಪ್ರೊ: ಶ್ರೀ ಆರ್. ಯೋಗೇಶ್ ಬಿನ್ ರಾಜು ಇವರಿಗೆ ಸಕಲೇಶಪುರ ತಾಲ್ಲೂಕು, ಹೊಸಗದ್ದೆ ಗ್ರಾಮದ ಸರ್ವೆ ನಂ.149 ರಲ್ಲಿ ಕಲ್ಲುಗಣಿ ಗುತ್ತಿಗೆ ಮತ್ತು ಸ್ಟೋನ್ ಕ್ರಷರ್ ಘಟಕ ಸ್ಥಾಪನೆಯನ್ನು ವಿರೋಧಿಸಿ ಹೊಂಕರವಳ್ಳಿ ಗ್ರಾಮದ ಗ್ರಾಮಸ್ಥರು ದಿನಾಂಕ 07.01.2023, 11.04.2023, 02.08.2023, 19.08.2023, 19.09.2023, 07.10.2023 ರಂದು ಸಲ್ಲಿಸಿರುವ ದೂರು ಅರ್ಜಿಯಲ್ಲಿ, ಸಕಲೇಶಪುರ ತಾಲ್ಲೂಕು, ಹೊಸಗದ್ದೆ ಗ್ರಾಮದ ಸರ್ವೆ ನಂ.149ರ ಅಕ್ಕ-ಪಕ್ಕದಲ್ಲಿ ವಾಸದ ಮನೆಗಳು ಇದ್ದು, ಗಣಿಗಾರಿಕೆ ಸಲುವಾಗಿ ಮಾಡುವ ಬ್ಲಾಸ್ಟಿಂಗ್ ನಿಂದ ಮನೆಗಳು ಬಿರುಕು ಬಿಟ್ಟು ಬಿದ್ದುಹೋಗುತ್ತವೆ ಎಂದು ಉಲ್ಲೇಖಿಸಿರುತ್ತಾರೆ.

. . . 5

| | | |
|---|---|---|
| | | ಪರಿಶೀಲಿಸಲಾಗಿ, ಶ್ರೀ ಲಕ್ಷ್ಮೀ ಎಂಟರ್ ಪ್ರೈಸಸ್, ಪ್ರೊ: ಶ್ರೀ ಆರ್. ಯೋಗೇಶ್ ಬಿನ್ ರಾಜು ಇವರಿಗೆ ಮಂಜೂರು ಮಾಡಿರುವ ಕಲ್ಲು ಗಣಿ ಗುತ್ತಿಗೆ ಸಂಖ್ಯೆ 605ರ ಪ್ರದೇಶವು ಸಾರ್ವಜನಿಕ ರಚನೆಗಳಿಂದ 50ಮೀಟರ್‌ಗಿಂತ ಹೆಚ್ಚಿನ ಅಂತರದಲ್ಲಿದ್ದು, ಸದರಿ ಲೈಸೆನ್ಸ್ ಪ್ರದೇಶದಲ್ಲಿ ಸ್ಫೋಟಕ ರಹಿತ ಗಣಿಗಾರಿಕೆಗೆ ನೀಡಲಾಗಿರುತ್ತದೆ.<br><br>ಸ್ಟೋನ್ ಕ್ರಷರ್ ಘಟಕ ಸ್ಥಾಪನೆಯನ್ನು ವಿರೋಧಿಸಿ ಹೊಂಕರವಳ್ಳಿ ಗ್ರಾಮದ ಗ್ರಾಮಸ್ಥರು ದಿನಾಂಕ: 07.01.2023, 11.04.2023, 02.08.2023, 19.08.2023, 19.09.2023, 07.10.2023 ರಂದು ಸಲ್ಲಿಸಿರುವ ಆಕ್ಷೇಪಣಾ ಅರ್ಜಿಯ ಹಾಗೂ ಶ್ರೀ ಲಕ್ಷ್ಮೀ ಎಂಟರ್ ಪ್ರೈಸಸ್, ಪ್ರೊ: ಶ್ರೀ ಆರ್. ಯೋಗೇಶ್ ಇವರಿಗೆ ಸ್ಟೋನ್ ಕ್ರಷರ್ ಘಟಕ ಮಂಜೂರಾತಿಗೆ ಫಾರಂ-ಸಿ ವಿತರಿಸುವ ಸಂಬಂಧ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣಾ ಪ್ರಾಧಿಕಾರ, ಹಾಸನ ರವರು ಸದರಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸುವಂತೆ ಸೂಚಿಸಿದ್ದು, ಪ್ರಾಧಿಕಾರದ ನಿರ್ಣಯದಂತೆ ಪರಿಶೀಲಿಸಿ, ಕ್ರಮ ವಹಿಸಲಾಗುವುದು. |
| ಇ) | ಸಾರ್ವಜನಿಕ ಹಿತದೃಷ್ಟಿಯಿಂದ ಕೂಡಿದ ಆಕ್ಷೇಪಣಾ ಅರ್ಜಿಯಂತೆ ಸ್ಥಳ ಪರಿಶೀಲಿಸಿ, ಜಿ.ಪಿ.ಎಸ್ ಪ್ರಕಾರ ಸರ್ವೆ ಕಾರ್ಯ ನಡೆಸಿ, ಗ್ರಾಮಸ್ಥರುಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಆಕ್ಷೇಪಿತ ಕ್ರಷರ್ ಘಟಕದಿಂದ ಆದ ಹಾನಿಯನ್ನು ತಪ್ಪಿಸುವ ಸಲುವಾಗಿ ಸರ್ಕಾರ ಕ್ರಮ ಕೈಗೊಳ್ಳುವುದೇ: (ವಿವರ ನೀಡುವುದು) | ಹೊಸಗದ್ದೆ ಗ್ರಾಮದ ಸರ್ವೆ ನಂ.149ರ ಪ್ರದೇಶವು ಆಲೂರು ಹಾಗೂ ಸಕಲೇಶಪುರ ತಾಲ್ಲೂಕುಗಳ ಗಡಿ ಭಾಗಕ್ಕೆ ಹೊಂದಿಕೊಂಡಂತಿದ್ದು, ಭೂದಾಖಲೆಗಳ ಸಹಾಯಕ ನಿರ್ದೇಶಕರು ಸಕಲೇಶಪುರ ಮತ್ತು ಆಲೂರು ತಾಲ್ಲೂಕು ರವರು ಭೂಮಾಪಕರು ದಿನಾಂಕ 23.02.2023 ರಂದು ಜಂಟಿ ಮೋಜಣಿ ನಡೆಸಿದ್ದು, ಹೊಸಗದ್ದೆ ಗ್ರಾಮದ ಸರ್ವೆ ನಂ.149ರ ಕಲ್ಲುಗಣಿಗಾರಿಕೆ ಅರ್ಜಿತ ಪ್ರದೇಶವು ಖಾಸಗಿ ಜಮೀನಾಗಿದ್ದು, ಸಕಲೇಶಪುರ ಹಾಗೂ ಆಲೂರು ತಾಲ್ಲೂಕುಗಳ ಸರ್ಕಾರಿ ಸರ್ವೆ ನಂಬರ್‌ಗಳಲ್ಲಿ ಯಾವುದೇ ಒತ್ತುವರಿ ಮಾಡಿ ಗಣಿಗಾರಿಕೆ ನಡೆದಿರುವುದಿಲ್ಲ ಎಂದು ವರದಿ ಸಲ್ಲಿಸಿರುತ್ತಾರೆ. ಸದರಿ ಕಲ್ಲುಗಣಿ ಗುತ್ತಿಗೆಯು ಸಾರ್ವಜನಿಕ ರಚನೆಗಳಿಂದ 50 ಮೀಟರ್‌ಗಿಂತ ಹೆಚ್ಚಿನ ಅಂತರದಲ್ಲಿದ್ದು, ಕೆಎಂಎಂಸಿ ನಿಯಮಗಳು, 1994ರ ನಿಯಮ 6(2) ರಲ್ಲಿ ಸಾರ್ವಜನಿಕ ರಚನೆಗಳಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಕ್ಕೆ ನಿಗದಿಪಡಿಸಿರುವ ಅಂತರವನ್ನು ಕಾಯ್ದಿರಿಸಿಕೊಂಡಿದೆ.<br><br>ಮುಂದುವರೆದು, ಕ್ರಷರ್ ಘಟಕ ಸ್ಥಾಪನೆಗೆ ಕ್ರಷರ್ ಪ್ರಾಧಿಕಾರದಿಂದ ಸುರಕ್ಷತಾ ಅನುಪಾಲನಾ ಪ್ರಮಾಣ ಪತ್ರ (ಫಾರಂ-ಬಿ1) ವಿತರಿಸಲಾಗಿದ್ದು, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ Consent for Establishment (CFE) ಮಾತ್ರ ಸಲ್ಲಿಕೆಯಾಗಿದ್ದು, Consent for Operation (CFO) ಸಲ್ಲಿಕೆಯಾಗಿರುವುದಿಲ್ಲ. ಅರ್ಜಿದಾರರು ಸದರಿ ಶಾಸನಬದ್ಧ ದಾಖಲಾತಿಗಳನ್ನು ಸಲ್ಲಿಸಿದಲ್ಲಿ, ಸ್ಟೋನ್ ಕ್ರಷರ್ ಘಟಕ ಚಾಲನೆಗೆ ಲೈಸೆನ್ಸ್ (ಫಾರಂ-ಸಿ) ಮಂಜೂರಾತಿ ಸಂದರ್ಭದಲ್ಲಿ ಜಿಲ್ಲಾ ಕಲ್ಲುಪುಡಿ ಮಾಡುವ ಘಟಕಗಳ ಲೈಸೆನ್ಸಿಂಗ್ ಮತ್ತು ನಿಯಂತ್ರಣ ಪ್ರಾಧಿಕಾರದಿಂದ ಪರಿಶೀಲಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು. |

ಸಂಖ್ಯೆ ಸಿಐ -ಎಂಎಂಎನ್/258/2023

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.